**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 1357/2015**

| | | |
|---|---|---|
| ಸಾಕ್ಷಿದಾರರ ಹೆಸರು | **ಶಿವರುದ್ರಪ್ಪ** | **ಫ್ರಾಸಾಃ 7** |
| ತಂದೆಯ/ಗಂಡನ ಹೆಸರು | ಮಲ್ಲಪ್ಪ | **ಚಾಸಾಃ 10** |
| ವಯಸ್ಸು | 65 ವರ್ಷ | ದಿಃ 02.02.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. |
| ಕೆಲಸ | ನಿವೃತ್ತ ಎ.ಎಸ್.ಐ | |
| ವಾಸ | ಮೈಸೂರು | |

**ಮುಖ್ಯ ವಿಚಾರಣೆ ಫ್ರಾಜ್ಞ ಸ.ಸ.ಅ ರವರಿಂದಃ**

ನಾನು 2014 ರಿಂದ 2017 ರವರೆಗೆ ಬದನವಾಳು ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 17.06.2015 ರಂದು ಸಂಜೆ 18.50 ಗಂಟೆಗೆ ನಾನು ಠಾಣಾ ಉಸ್ತುವಾರಿಯಲ್ಲಿರುವಾಗ ಚಾಸಾ 9 ರವರು ಠಾಣೆಗೆ ಹಾಜರಾಗಿ ಹಾಜರುಪಡಿಸಿದ ದೂರನ್ನು ನೀಡಿದ ಲಿಖಿತ ದೂರನ್ನು ಹೊಂದಿಕೊಂಡು ಠಾಣಾ ಮೊಕದ್ದಮೆ ಸಂಖ್ಯೆ 147/2015 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವ ವನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಯಕ್ಕೆ ಹಾಗೂ ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ದಿಃ 18.06.2015 ರಂದು ಚಾಸಾ 1 ರವರು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟ ಮೇರೆಗೆ ಚಾಸಾ 2 ಮತ್ತು 3 ರವರ ಸಮಕ್ಷಮ ಕೃತ್ಯ ಸ್ಥಳದ ಮಹಜರ್ ಕ್ರಮ ಜರುಗಿಸಿದ್ದು ಆಗ ಸಮಯ ಬೆಳಿಗ್ಗೆ 10.15 ರಿಂದ 11 ಗಂಟೆ ಆಗಿರುತ್ತದೆ. ಸ್ಥಳದಲ್ಲಿ ಯಾವುದೇ ವಸ್ತುಗಳನ್ನು ಅಮಾನತ್ ಪಡಿಸಿಕೊಂಡಿರುವುದಿಲ್ಲ.

ನಂತರ ಅದೇ ದಿನ ಈ ಪ್ರಕರಣದ ಕಡತವನ್ನು ಚಾಸಾ 11 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿ ದೂರಿನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿ ಮಹಜರ್ ನಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ–2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ–2(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿ ಪ್ರ.ವ.ವ ದಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ–5 ಎಂದು, ಸಾಕ್ಷಿಯ ಸಹಿಯನ್ನು ನಿಪಿ–5(ಎ) ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಎಸ್.ವಿ ವಕೀಲರಿಂದಃ</u>**

ಚಾಸಾ 9 ರವರು ದೂರನ್ನು ಆಸ್ಪತ್ರೆಯಲ್ಲಿ ದಾಖಲಿಸಿಕೊಂಡು ಹಾಜರುಪಡಿಸಿರುತ್ತಾರೆ. ಪಂಚಾಯ್ತಿದಾರರನ್ನು ಮಹಜರ್ ಗೆ ನಾವೇ ಕರೆಸಿರುತ್ತೇವೆ. ಪಂಚಾಯ್ತಿದಾರರವರನ್ನು ಚಾಸಾ 1 ರವರೇ ಕರೆದುಕೊಂಡು ಬಂದಿರುತ್ತಾರೆ. ನಾನು ಕೃತ್ಯ ಸ್ಥಳದಲ್ಲಿ ಮಹಜರ್ ಕ್ರಮ ಜರುಗಿಸಿಲ್ಲ ಎಂದರೆ ಸರಿಯಲ್ಲ. ಅದನ್ನು ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಪಂಚಾಯ್ತಿದಾರರ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಪಡೆಯಲಾಗಿದೆ ಎಂದರೆ ಸರಿಯಲ್ಲ. ಚಾಸಾ 1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ ಇಲ್ಲ</u>**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ.ಹೇ.ಕೇ.ಸ.ಇದೆ.ಎಂ.ಒ**

1 **ನೇ ಹೆಚ್ಚುವರಿ ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ನ್ಯಾಯಾಲಯ, ನಂಜನಗೂಡು**